# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮಂಜುನಾಥ ಭಂಡಾರಿ ರವರು ನಿಯಮ 330 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನಾ ಪತ್ರಕ್ಕೆ ಮಾನ್ಯ ಮುಖ್ಯಮಂತ್ರಿಯವರ ಉತ್ತರ.

ವಿಷಯ: ಕರ್ನಾಟಕ ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸ್ಥಳಿಯಾಡಳಿತ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳು ಕಳೆದ 3 ದಶಕಗಳಿಂದ ಗ್ರಾಮ ಪಂಚಾಯಿತಿ ನೌಕರರಾಗಿ ಈ ಕೆಳಗಿನ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

- ಕ್ಲರ್ಕ ಕಂ ಡಾಟಾ ಎಂಟ್ರಿ ಆಪ್‌ರೇಟರ್, ಬಿಲ್ ಕಲೆಕ್ಟರ್ ಹಾಗೂ ಡಾಟಾ ಎಂಟ್ರಿ ಆಪ್‌ರೇಟರ್ ಹುದ್ದೆಗಳನ್ನು "ಸಿ" ದರ್ಜೆಗೆ ಏರಿಸಬೇಕು.
- ಜವಾನ, ಕ್ಲೀನರ್ ಹಾಗೂ ವಾಟರಮೆನ್ ಹುದ್ದೆಗಳನ್ನು "ಡಿ" ದರ್ಜೆಗೆ ಏರಿಸಬೇಕು.

ಈ ಮೇಲ್ಕಂಡ ಗ್ರಾಮ ಪಂಚಾಯಿತಿ ನೌಕರರಿಗೆ ಇಲಾಖೆಯಲ್ಲಿ ಯಾವುದೇ ಸೂಕ್ತ ಸ್ಥಾನಮಾನ ವಿಶೇಷ ಸೌಲಭ್ಯಗಳನ್ನು ನೀಡದೇ ಕನಿಷ್ಠ ವೇತನ ನೀಡಿ ಜೀತದಾಳುಗಳಂತೆ ಹಗಲಿರುಳು ದುಡಿಸಿಕೊಳ್ಳಲಾಗುತ್ತಿದೆ. ನೈಸರ್ಗಿಕ ವಿಕೋಪಗಳಂತಹ ಸಂದರ್ಭದಲ್ಲಿ ಇಲಾಖೆಯ ಕೆಲಸದ ಜೊತೆಗೆ ಹೆಚ್ಚುವರಿಯಾಗಿ ಕೆಲಸವನ್ನು ನಿರ್ವಹಿಸಲು ನೀಡಲಾಗುತ್ತಿದೆ.

ಆದರೆ, ಇವರ ಜೀವನಕ್ಕೆ ಯಾವುದೇ ಭದ್ರತೆಯಿಲ್ಲ. ಗ್ರಾಮ ಪಂಚಾಯಿತಿಯು ಇತರೇ ಸರ್ಕಾರಿ ನೌಕರರಂತೆ ದಿನದ 24 ಗಂಟೆಯೂ ಕೆಲಸ ನಿರ್ವಹಿಸುವ ಇವರು ಸರ್ಕಾರಿ ನೌಕರರಲ್ಲ. ಇವರಿಗೆ ಕನಿಷ್ಠ ವೇತನ ನೀಡುವ ಬದಲು ಇವರನ್ನು ಸಿ ಮತ್ತು ಡಿ ದರ್ಜೆಯ ಸರ್ಕಾರಿ ನೌಕರರೆಂದು ಪರಿಗಣಿಸಿ, ಪ್ರತ್ಯೇಕ ವೇತನ ಶ್ರೇಣಿ ನಿಗದಿಪಡಿಸಬೇಕಾಗಿದೆ. ಇವರಿಗೆ ಹಾಗೂ ಇವರ ಅವಲಂಬಿತರಿಗೆ ಸರ್ಕಾರದಿಂದ ಸೂಕ್ತ ಆರೋಗ್ಯ ಭದ್ರತೆ ಸೌಲಭ್ಯ ನೀಡುವ ಅಗತ್ಯತೆಯ ಬಗ್ಗೆ.

***

**ಉತ್ತರ:** ಭಾರತ ಸಂವಿಧಾನದ ಅನುಚ್ಛೇದ 242 ಬಿ ರಂತೆ ಗ್ರಾಮ ಪಂಚಾಯಿತಿಯು ರಚನೆಗೊಂಡಿರುತ್ತದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 2(21) ರಂತೆ ಗ್ರಾಮ ಪಂಚಾಯಿತಿಯು ಸ್ಥಳೀಯ ಪ್ರಾಧಿಕಾರವಾಗಿರುತ್ತದೆ.

ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 886 ಗ್ರಾಪಂಕಾ 2016, ದಿನಾಂಕ:29-09-2020 ರಲ್ಲಿ ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಸಿಬ್ಬಂದಿ ಸ್ವರೂಪ, ವೇತನ ಶ್ರೇಣಿಗಳು, ನೇಮಕಾತಿ ವಿಧಾನ ಮತ್ತು ಇತರೆ ಸೇವಾ ಷರತ್ತುಗಳು) ನಿಯಮಗಳು, 2020 ಅನ್ನು ರೂಪಿಸಲಾಗಿದ್ದು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 112 ಮತ್ತು 113 ರಂತೆ ಗ್ರಾಮ ಪಂಚಾಯಿತಿಗಳ ಸಿಬ್ಬಂದಿ ವರ್ಗದ ಸ್ವರೂಪ, ನೇಮಕಾತಿ ವಿಧಾನ, ರಜೆ ಸೌಲಭ್ಯ, ಅನುಕಂಪದ ಆಧಾರಿತ ನೇಮಕಾತಿ, ಶಿಸ್ತು ಪ್ರಾಧಿಕಾರ, ಮರಣ ಮತ್ತು ನಿವೃತ್ತಿ ಉಪದಾನ ಮತ್ತು ಇತರೆ ಸೇವಾ ಷರತ್ತುಗಳನ್ನು ನಿರ್ದಿಷ್ಟಪಡಿಸಲಾಗಿದೆ.

ಸದರಿ ಅಧಿನಿಯಮದ ಪ್ರಕರಣ 112 ರಡಿ ಸರ್ಕಾರವು ಈ ಕೆಳಕಂಡಂತೆ ಗ್ರಾಮ ಪಂಚಾಯಿತಿ ಸಿಬ್ಬಂದಿ ವರ್ಗದ ಮಾದರಿ ನಿಗದಿಪಡಿಸಿದೆ.

1. ಬಿಲ್ ಕಲೆಕ್ಟರ್
2. ಕ್ಲರ್ಕ್ ಕಂ. ಡಾಟಾ ಎಂಟ್ರಿ ಆಪರೇಟರ್
3. ಡಾಟಾ ಎಂಟ್ರಿ ಆಪ್‌ರೇಟರ್
4. ವಾಟರ್ ಆಪರೇಟರ್
5. ಕ್ಲೀನರ್‍ಸ್
6. ಅಟೆಂಡೆಂಟ್

ಮಂಜೂರಾದ ಹುದ್ದೆಗಳಿಗೆ ಗ್ರಾಮ ಪಂಚಾಯಿತಿಯು ಪ್ರಕರಣ 113 ರಂತೆ ನೇಮಕಾತಿ ಮಾಡಿಕೊಂಡು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅನುಮೋದನೆ ಪಡೆದುಕೊಂಡು ಕರ್ತವ್ಯ ನಿರ್ವಹಿಸುತ್ತಿರುವ ನೌಕರರು ಸ್ಥಳೀಯ ಪ್ರಾಧಿಕಾರವಾದ ಗ್ರಾಮ ಪಂಚಾಯಿತಿಯ ಖಾಯಂ ನೌಕರರಾಗಿರುತ್ತಾರೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 113 ರಲ್ಲಿ ಗ್ರಾಮ ಪಂಚಾಯಿತಿಯು ನೌಕರರನ್ನು ನೇಮಕ ಮಾಡಿಕೊಂಡು ತಮ್ಮ ಸ್ವಂತ ಸಂಪನ್ಮೂಲದಿಂದ ವೇತನವನ್ನು ಪಾವತಿಸಬೇಕಾಗಿರುತ್ತದೆ. ಗ್ರಾಮ ಪಂಚಾಯಿತಿಗಳು ಸರ್ಕಾರದ ಮಾರ್ಗಸೂಚಿ ಅನುಸರಿಸದೆ ಹೆಚ್ಚಿನ ಸಿಬ್ಬಂದಿಗಳನ್ನು ನೇಮಿಸಿಕೊಂಡಿದ್ದರಿಂದ ಅವರಿಗೆ ಸಮರ್ಪಕವಾಗಿ ಕನಿಷ್ಠ ವೇತನ ಪಾವತಿಸುತ್ತಿರಲಿಲ್ಲ. ಗ್ರಾಮ ಪಂಚಾಯತ್ ಸಿಬ್ಬಂದಿಗಳು ತಮಗೆ ಸಮರ್ಪಕವಾಗಿ ಕನಿಷ್ಠ ವೇತನ ಪಾವತಿಯಾಗದಿರುವ ಬಗ್ಗೆ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದನ್ನು ಪರಿಗಣಿಸಿ ಮಾರ್ಚ್ 2018 ರಿಂದ ಗ್ರಾಮ ಪಂಚಾಯತ್ ಸಿಬ್ಬಂದಿಗಳಿಗೆ ಸರ್ಕಾರದ ವತಿಯಿಂದಲೇ ಕನಿಷ್ಠ ವೇತನ ಪಾವತಿಸಲಾಗುತ್ತಿದೆ. ಕಾರ್ಮಿಕ ಇಲಾಖೆಯು ಗ್ರಾಮ ಪಂಚಾಯಿತಿ ನೌಕರರಿಗೆ ಕಾಲಕಾಲಕ್ಕೆ ನಿಗದಿಪಡಿಸುವ ಕನಿಷ್ಠ ವೇತನವನ್ನು ನೀಡಲಾಗುತ್ತದೆ.

ಗ್ರಾಮ ಪಂಚಾಯಿತಿ ನೌಕರರಿಗೆ 10 ದಿನಗಳ ಸಾಂದರ್ಭಿಕ ರಜೆ, 2 ದಿನಗಳ ನಿರ್ಬಂಧಿತ ರಜೆ, ಮಹಿಳಾ ನೌಕರರಿಗೆ 180 ದಿನಗಳ ಪ್ರಸೂತಿ ರಜೆ ಮತ್ತು ಪುರುಷ ನೌಕರರಿಗೆ 15 ದಿನಗಳ ಪಿತೃತ್ವ ರಜೆ ನೀಡಲಾಗುತ್ತದೆ. ಗ್ರಾಮ ಪಂಚಾಯಿತಿ ಸಿಬ್ಬಂದಿಯು ಸೇವೆಯಲ್ಲಿದ್ದಾಗ ಮರಣ ಹೊಂದಿದಲ್ಲಿ ಅವರ ನ್ಯಾಯಬದ್ಧ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

ಪ್ರಸ್ತುತ ಸೇವೆಯಿಂದ ನಿವೃತ್ತಿಯಾಗುವ ಗ್ರಾಮ ಪಂಚಾಯಿತಿ ಸಿಬ್ಬಂದಿಗೆ ಅಥವಾ ಸೇವೆಯಲ್ಲಿ ಮರಣ ಹೊಂದಿದ ಸಿಬ್ಬಂದಿಯ ನ್ಯಾಯಬದ್ಧ ಅವಲಂಬಿತರಿಗೆ ಅವರುಗಳು ಸಲ್ಲಿಸಿದ ಸೇವಾ ಅವಧಿಯ ಆಧಾರದ ಮೇಲೆ ಒಂದು ವರ್ಷದ ಸೇವೆಗೆ 15 ದಿನಗಳ ವೇತನದಂತೆ ಸೇವಾ ಅವಧಿಯ ಗರಿಷ್ಠ 20 ತಿಂಗಳ ವೇತನ ಮೀರದಂತೆ ನಿವೃತ್ತಿ ಹಾಗೂ ಮರಣೋತ್ತರ ಉಪದಾನಗಳನ್ನು ನೀಡಲಾಗುತ್ತಿದೆ.

ಗ್ರಾಮ ಪಂಚಾಯತಿ ಸಿಬ್ಬಂದಿ ವರ್ಗದವರಿಗೆ ಅನಿರೀಕ್ಷಿತ ಸಂದರ್ಭಗಳಲ್ಲಿ ಅಪಘಾತಗಳಾದಲ್ಲಿ ಅವರ ಅವಲಂಬಿತ ಕುಟುಂಬ ಸದಸ್ಯರಿಗೆ ಆರ್ಥಿಕ ಭದ್ರತೆ ಒದಗಿಸುವ ದೃಷ್ಟಿಯಿಂದ ಪ್ರಧಾನ ಮಂತ್ರಿಯವರ "ಜನ್‌ಧನ್" ಯೋಜನೆಯಡಿ ಈ ಕೆಳಕಂಡ ವಿಮಾ ಪಾಲಿಸಿಗಳನ್ನು ಮಾಡಿಸಿ ಸಿಬ್ಬಂದಿಗಳ ವೇತನದ ಬ್ಯಾಂಕ್ ಖಾತೆಗೆ ಲಿಂಕ್ ಮಾಡಿಸಿ ವಾರ್ಷಿಕವಾಗಿ ಕಟಾವಣೆ ಮಾಡಲು ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

1) ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಭೀಮಾ ಯೋಜನೆ.
2) ಪ್ರಧಾನ ಮಂತ್ರಿ ಸುರಕ್ಷಾ ಜ್ಯೋತಿ ಭೀಮಾ ಯೋಜನೆ.
3) ಭಾರತೀಯ ಸ್ಟೇಟ್ ಬ್ಯಾಂಕ್‌ನ ಗ್ರೂಪ್ ಫರ್ಸನಲ್ ಆಕ್ಸಿಡೆಂಟ್ ಇನ್‌ಶ್ಯೂರೆನ್ಸ್.

2020 ರ ಕೋವಿಡ್ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಸಿಬ್ಬಂದಿಗಳು ಕೋವಿಡ್ ನಿಯಂತ್ರಣಕ್ಕಾಗಿ ಶ್ರಮಿಸುತ್ತಿದ್ದ ವೇಳೆ ಕೋವಿಡ್ ಸೋಂಕಿನಿಂದ ಮೃತಪಟ್ಟ ಸಂದರ್ಭದಲ್ಲಿ ಸರ್ಕಾರವು ಅವರಿಗೆ 30 ಲಕ್ಷ ರೂ ಪರಿಹಾರ ಘೋಷಿಸಿತ್ತು. ಘೋಷಿಸಲಾದ ಪರಿಹಾರ ಪಾವತಿಗೆ ಪ್ರತ್ಯೇಕ ಲೆಕ್ಕ ಶೀರ್ಷಿಕೆ ಇರಲಿಲ್ಲ. ಈ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯತ್ ನೌಕರರು ಕೋವಿಡ್-19 ಕರ್ತವ್ಯ ನಿರ್ವಹಿಸುತ್ತಿದ್ದಾಗ ಕೋವಿಡ್-19 ಸಾಂಕ್ರಾಮಿಕದಿಂದಾಗಿ ಮರಣ ಹೊಂದಿದ್ದಲ್ಲಿ ಅವರ ಕುಟುಂಬದವರಿಗೆ 30 ಲಕ್ಷ ರೂ. ಪರಿಹಾರ ನೀಡಲು ಅಥವಾ ಕೋವಿಡ್-19 ಸಾಂಕ್ರಾಮಿಕದಿಂದಾಗಿ ಅನಾರೋಗ್ಯಗೊಂಡಲ್ಲಿ ಸದರಿ ಚಿಕಿತ್ಸೆಗಾಗಿ ತಗಲುವ ವೈದ್ಯಕೀಯ ವೆಚ್ಚ ಭರಿಸಲು ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಆಶ್ವಾಸನೆ ನಿಧಿಯನ್ನು ಸ್ಥಾಪಿಸಿ ಪರಿಹಾರ ನೀಡಲು ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 179 ಜಿಪಿಎಸ್ 2021, ದಿನಾಂಕ:28-06-2021 ರಲ್ಲಿ ತಿಳಿಸಲಾಗಿದೆ.

ಗ್ರಾಮ ಪಂಚಾಯಿತಿ ನೌಕರರು ಸರ್ಕಾರಿ ನೌಕರರಾಗಿರುವುದಿಲ್ಲ. ಸದರಿ ನೌಕರರನ್ನು ಸಿ ಮತ್ತು ಡಿ ದರ್ಜೆ ನೌಕರರೆಂದು ಪರಿಗಣಿಸಿ ವೇತನ ಶ್ರೇಣಿ ನಿಗದಿಪಡಿಸಲು ಆಡಳಿತಾತ್ಮಕವಾಗಿ ಸಾಧ್ಯವಾಗುವುದಿಲ್ಲ.

ಸಂಖ್ಯೆ: ಗ್ರಾಅಪ 412 ಗ್ರಾಪಂಅ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ

68 330